# ಗಡಿಕನ್ನಡಿಗ

ಸಂಪಾದಕ:ಮುರುಗೇಶ ಬಿ.ಶಿವಪೂಜಿ

www.gadikannadiga.com

ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ,ಕೊಪ್ಪಳ,ಗದಗ, ವಿಜಯಪುರ, ವಿಜಯನಗರ ಬಳ್ಳಾರಿಗಳಿಂದ ಏಕಕಾಲಕ್ಕೆ ಪ್ರಕಟಿತ

ಸಂಪುಟ:22/ಸಂಚಿಕೆ:143 RNI NO.KAR KAN/2003/10452:No./PMG/KA/NK/BM/743/24-26 ಶುಕ್ರವಾರ ದಿನಾಂಕ: 03-05-2024 ಪುಟಗಳು: 6 ಬೆಲೆ:1 ರೂ ☎ 9480498694 / Email-mbshivapuji@gmail.com2


## 7 ಹಂತದಲ್ಲಿ ಮತದಾನ ನಡೆಸುವ ಅಗತ್ಯ ಏನಿತ್ತು: ಮಾಜಿ ಸಿಎಂ ವೀರಪ್ಪ ಮೊಯ್ಲಿ ಕಿಡಿ



ಬೆಳಗಾವಿ: ತಂತ್ರಜ್ಞಾನ ಯುಗದಲ್ಲಿ ದೇಶಾದ್ಯಂತ ಏಕಕಾಲಕ್ಕೆ ಚುನಾವಣೆ ನಡೆಸಬಹುದಿತ್ತು. ಅದನ್ನೆಲ್ಲ ಬಿಟ್ಟು ಕಾಶ್ಮೀರದಿಂದ ಕನ್ಯಾಕುಮಾರಿವರೆಗೂ ಚುನಾವಣೆಯ ಪ್ರಚಾರ ನಡೆಸಲು ಅನುಕೂಲ ಮಾಡಿಕೊಳ್ಳುವ ಸಲುವಾಗಿ 7 ಹಂತದಲ್ಲಿ ಮತದಾನ ನಡೆಸಲಾಗುತ್ತಿದೆ, ಬಿಜೆಪಿಗರು ಅವರಿಗೆ ಬೇಕಾದ ಹಾಗೇ ಚುನಾವಣೆ ನಡೆಸುತ್ತಿದ್ದಾರೆ ಎಂದು ಎಂದು ಮಾಜಿ ಸಿಎಂ ವೀರಪ್ಪ ಮೊಯ್ಲಿ ಕಿಡಿಕಾರಿದರು. ಇಲ್ಲಿನ ಜಿಲ್ಲಾ ಕಾಂಗ್ರೆಸ್ ಭವನದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿ, ಲೋಕಸಭಾ ಚುನಾವಣೆ ರಾಷ್ಟ್ರದ ಮಹತ್ವದ ಚುನಾವಣೆಯಾಗಿದೆ. ಪ್ರಧಾನ ನರೇಂದ್ರ ಮೋದಿ ಅವರೇ ಮುಂದುವರೆಸಿಕೊಂಡು ಹೋದರೆ ಎಲ್ಲಾ ಚುನಾವಣೆ ಒಂದೇ ಸಲ ನಡೆಸಿದರು ಅಚ್ಚರಿ ಇಲ್ಲ ಎಂದರು.

ನರೇಂದ್ರ ಮೋದಿ ಆಡಳಿತದಲ್ಲಿ ದೇಶದಲ್ಲಿ ಮಿಲಿಟರಿ ಆಡಳಿತ ತರಲು ಹೊರಟಿದ್ದಾರೆ. ಬಿಜೆಪಿ ಪ್ರಣಾಳಿಕೆಯಲ್ಲಿ ಮೋದಿ ಗ್ಯಾರಂಟಿ ಎಂದು ನಮೂದಿಸಿದ್ದಾರೆ.

(2 ನೇ ಪುಟಕ್ಕೆ)

## SC,ST,OBC ಮೀಸಲಾತಿಯನ್ನು ಲೂಟಿ ಮಾಡಿದ್ದರೆ, ಅದು ಕಾಂಗ್ರೆಸ್ ಪಕ್ಷ ಮಾತ್ರ: ಅಮಿತ್ ಶಾ

ನವದೆಹಲಿ; ಲೋಕಸಭೆ ಚುನಾವಣೆಯ ಏಳು ಹಂತಗಳ ಪೈಕಿ ಎರಡು ಹಂತಗಳು ಮುಕ್ತಾಯಗೊಂಡಿದ್ದು, ಕೇಂದ್ರ ಗೃಹ ಮತ್ತು ಸಹಕಾರ ಸಚಿವ ಅಮಿತ್ ಶಾ ಅವರು ಮುಂಬರುವ ಮೂರನೇ ಹಂತದ ಚುನಾವಣೆಯ ಪ್ರಚಾರವನ್ನು ತೀವ್ರಗೊಳಿಸಿದ್ದಾರೆ. ಸಾರ್ವಜನಿಕ ಸಭೆಗಳು ಮತ್ತು ರೋಡ್ಶೋಗಳ ಮೂಲಕ ಶಾ ಅವರು ರಾಜ್ಯಗಳಾದ್ಯಂತ ಜನರೊಂದಿಗೆ ತೊಡಗಿಸಿಕೊಂಡಿದ್ದಾರೆ. ಅಸ್ಸಾಂನ ಗುವಾಹಟಿಯಲ್ಲಿರುವ ಭಾರತೀಯ ಜನತಾ ಪಕ್ಷದ ರಾಜ್ಯ ಕಚೇರಿಯಲ್ಲಿ ನಡೆದ ಪ್ರಮುಖ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅಮಿತ್ ಶಾ, ಸಂವಿಧಾನವನ್ನು ಬದಲಾಯಿಸುವುದು ಮತ್ತು ಮೀಸಲಾತಿಯನ್ನು ಕೊನೆಗೊಳಿಸುವುದು ಸೇರಿದಂತೆ ಬಿಜೆಪಿ ವಿರುದ್ಧ ಕಾಂಗ್ರೆಸ್ ನೇತೃತ್ವದ ಇಂಡಿ ಒಕ್ಕೂಟ ಮಾಡುತ್ತಿರುವ ಸುಳ್ಳು ಸುದ್ದಿಗಳನ್ನು ತಳ್ಳಿಹಾಕಿದರು.

ಭಾರತೀಯ ರಾಜಕೀಯಕ್ಕೆ ಹೊಸ ದಿಶೆಯನ್ನು ನೀಡುವಲ್ಲಿ ಹೆಸರುವಾಸಿಯಾದ ಶಾ, SC,ST,OBC ಮೀಸಲಾತಿಯಲ್ಲಿ ಯಾವುದೇ ರಾಜಕೀಯ ಪಕ್ಷವು ಜನರಿಗೆ ಮೋಸ ಮಾಡಿದ್ದರೆ ಅದು ಕಾಂಗ್ರೆಸ್ ಮಾತ್ರ" ಎಂದು ಹೇಳಿದರು.

ಇತ್ತೀಚೆಗೆ, ಕಾಂಗ್ರೆಸ್ ನಕಲಿ ವೀಡಿಯೊಗಳ ಮೂಲಕ ಸಾರ್ವಜನಿಕರನ್ನು ದಾರಿ ತಪ್ಪಿಸುವ ಪ್ರಯತ್ನ ಮಾಡುತ್ತಿದೆ, ಭಾರತೀಯ ಜನತಾ ಪಕ್ಷವು 400 ಕ್ಕಿಂತ ಹೆಚ್ಚು ಸ್ಥಾನಗಳನ್ನು ಪಡೆದರೆ, ಮೋದಿ ಸರ್ಕಾರವು ಸಂವಿಧಾನವನ್ನು ತಿದ್ದುಪಡಿ ಮಾಡುವ ಮೂಲಕ ಮೀಸಲಾತಿಯನ್ನು ರದ್ದುಗೊಳಿಸುತ್ತದೆ ಎಂದು ಆರೋಪಿಸುತ್ತಿದೆ.ಆದಾಗ್ಯೂ,ಮೋದಿಸರ್ಕಾರದ ಕಳೆದ 10 ವರ್ಷಗಳ ಆಡಳಿತದ ಆಧಾರದ ಮೇಲೆ ಈ ಆರೋಪವು ಆಧಾರರಹಿತ ಮತ್ತು ಅವಾಸ್ತವ ಎಂದು ಗೊತ್ತಾಗುತ್ತದೆ. 2014 ಮತ್ತು 2019ರಲ್ಲಿ ಭಾರತೀಯ ಜನತಾ ಪಕ್ಷಕ್ಕೆ ದೇಶದ ಜನತೆ ಪೂರ್ಣ ಬಹುಮತ ನೀಡಿದ್ದು, ಬಿಜೆಪಿ 10ವರ್ಷಗಳಿಂದ ಪೂರ್ಣ ಬಹುಮತದ ಸರ್ಕಾರ ನಡೆಸುತ್ತಿದೆ, ಆದರೊಂದುಬಾರಿಯೂಅಧಿಕಾರವನ್ನು ದುರ್ಬಳಕೆ ಮಾಡಿಕೊಂಡು, ಕಾಂಗ್ರೆಸ್ನಂತೆ ತುರ್ತು ಪರಿಸ್ಥಿತಿ ಘೋಷಿಸಿಲ್ಲ ಅಥವಾ ಅವಧಿಯನ್ನು ವಿಸ್ತರಿಸಿಲ್ಲ.ಅದರ ಬದಲಿಗೆ ಮೋದಿ ನೇತೃತ್ವದ ಮತ್ತು ಅಮಿತ್ ಶಾ ಅವರ ಕೌಶಲ್ಯಪೂರ್ಣ ಮಾರ್ಗದರ್ಶನದ ಈ ಸರ್ಕಾರ ಪೂರ್ಣ ಬಹುಮತವನ್ನು 370ನೇ ವಿಧಿಯನ್ನು ತೆಗೆದುಹಾಕಲು, ತ್ರಿವಳಿ ತಲಾಖ್ ರದ್ದುಗೊಳಿಸಲು,ಬ್ರಿಟಿಷರು ಮಾಡಿದ ಕಾನೂನುಗಳನ್ನು ಬದಲಾಯಿಸಲು, ಕರೋನಾ ಸಾಂಕ್ರಾಮಿಕ ಸಮಯದಲ್ಲಿ ಲಾಕ್ಡೌನ್ ಹೇರಲು, ಸಿಎಎ ತರಲು ಮತ್ತು ಭಗವಾನ್ ಶ್ರೀರಾಮನ ಮಂದಿರ ನಿರ್ಮಾಣದ ಮಾರ್ಗ ವನ್ನು ಸುಗಮಗೊಳಿಸಲು ಬಳಸಿಕೊಂಡಿದೆ. ಹಸಿ ಬಿಸಿ ಸುಳ್ಳಗಳನ್ನು ಹಬ್ಬಿಸಿ, ಸಾರ್ವಜನಿಕರಲ್ಲಿ ಗೊಂದಲ ಸೃಷ್ಟಿಸಲು ಕಾಂಗ್ರೆಸ್ ಪಕ್ಷ ಮುಂದಾಗಿದೆ ಎಂಬುದು ದೇಶದ ಜನತೆಗೆ ಗೊತ್ತಿದೆ.

ಆಂಧ್ರಪ್ರದೇಶ ಮತ್ತು ಕರ್ನಾಟಕದ ಕಾಂಗ್ರೆಸ್ ಸರ್ಕಾರವು ಎಸ್ಸಿ, ಎಸ್ಟಿ ಮತ್ತು ಒಬಿಸಿ ಹಕ್ಕುಗಳ ವಿರುದ್ಧ ಕೆಲಸ ಮಾಡಿ, ಅಸಂವಿಧಾನಿಕ ರೀತಿಯಲ್ಲಿ ಧರ್ಮದ ಆಧಾರದ ಮೇಲೆ ಮೀಸಲಾತಿಯನ್ನು ನೀಡಿತು. ಅಂತ್ಯೋದಯ ರಾಜಕೀಯವನ್ನು ಪ್ರತಿಪಾದಿಸುವ ಅಮಿತ್ ಶಾ, ಧರ್ಮಾಧಾರಿತ ಮೀಸಲಾತಿ ಅಸಾಂವಿಧಾನಿಕ ಎಂದು ನಂಬುತ್ತಾರೆ ಮತ್ತು ಈ ರಾಜ್ಯಗಳಲ್ಲಿ ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬಂದರೆ, ಧರ್ಮಾಧಾರಿತ ಮೀಸಲಾತಿಯನ್ನು ರದ್ದುಪಡಿಸಿ, ಎಸ್ಸಿ, ಎಸ್ಟಿ, ಮತ್ತು ಒಬಿಸಿ ಅವರಿಗೆ ನ್ಯಾಯ ನೀಡಲಿದೆ. ಎಸ್ಸಿ, ಎಸ್ಟಿ ಮತ್ತು ಒಬಿಸಿ ಮೀಸಲಾತಿಗೆ ಬಿಜೆಪಿಯೇ ಅತಿ ದೊಡ್ಡ ಬೆಂಬಲಿಗವಾಗಿದೆ.

ಸ್ವಾತಂತ್ರ್ಯಾನಂತರ ದೇಶದ ಜನತೆ ದಶಕಗಳ ಕಾಲ ಕಾಂಗ್ರೆಸ್ ಆಡಳಿತವನ್ನು ಕಂಡಿದ್ದು, ಈ ಅವಧಿಯಲ್ಲಿ (2 ನೇ ಪುಟಕ್ಕೆ)

## ಜಿ.ಪಂ. ಸಿಇಒ ಭರತ್ ಎಸ್ ಅವರಿಂದ ನರೇಗಾ ಕಾಮಗಾರಿ ಸ್ಥಳ ಪರಿಶೀಲನೆ



ಗದಗ ಮೇ 2: ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಭರತ ಎಸ್ ಅವರು ಅಡವಿಸೋಮಾಪೂರ ಗ್ರಾಮ ಪಂಚಾಯತಿ ವ್ಯಾಪ್ತಿಯ ಮನರೇಗಾ ಯೋಜನೆಯಡಿಯ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ನರೇಗಾ ಕೂಲಿಕಾರರನ್ನು ಉದ್ದೇಶಿಸಿ ಮಾತನಾಡಿದ ಅವರು ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯು ರೈತರಿಗೆ ಮತ್ತು ಬಡವರಿಗೆ ಅನುಕೂಲವಾಗಿದೆ. ಎಲ್ಲರೂ ಇದರ ಸೌಲಭ್ಯಗಳನ್ನು ಪಡೆದುಕೊಳ್ಳಬೇಕು ಎಂದು ಹೇಳಿದರು. ಇದೇ ಸಂದರ್ಭದಲ್ಲಿ ಗಂಡು-ಹೆಣ್ಣಿಗೆ ಸಮಾನ ಕೆಲಸಕ್ಕೆ ಸಮಾನ ಕೂಲಿ ನೀಡಲಾಗುವದು. ಪ್ರತಿ ಕುಟುಂಬಕ್ಕೆ ಒಂದು ವರ್ಷದಲ್ಲಿ 100 ದಿನಗಳ ಉದ್ಯೋಗ ನೀಡಲಾಗುತ್ತಿದೆ. ಗ್ರಾಮೀಣ ಭಾಗದ ಜನರು ಉದ್ಯೋಗ ಅರಸಿ ಬೇರೆ ರಾಜ್ಯ, ಜಿಲ್ಲೆ ಹಾಗೂ ನಗರಗಳಿಗೆ ವಲಸೆ ಹೋಗುವುದನ್ನು ತಡೆಗಟ್ಟುವುದೇ ಈ ಯೋಜನೆಯ ಮುಖ್ಯ ಉದ್ದೇಶವಾಗಿದೆ. ಎಲ್ಲರೂ ತಮ್ಮ ಸ್ವಂತ ಊರಿನಲ್ಲಿ03?? ಇದ್ದು ಉದ್ಯೋಗ ಮಾಡಿ ಕೂಲಿ ಪಡೆಯಬಹುದು ಎಂದು ಸಲಹೆ ನೀಡಿದರು. ಈ ವೇಳೆ ಗದಗ ತಾಪಂ ಸಹಾಯಕ ನಿರ್ದೇಶಕ (ಗ್ರಾ.ಉ), ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಜಿಲ್ಲಾ ಪಂಚಾಯಿತಿ ಹಾಗೂ ತಾಲೂಕು ಪಂಚಾಯತ ನರೇಗಾ ಸಿಬ್ಬಂದಿಗಳು ಹಾಜರಿದ್ದರು.

## ಮೇ 05 ರಂದು ಬೆಳಗಾವಿಯಲ್ಲಿ ಲಿಂಗಾಯತ ಸಂಘಟನೆಯಿಂದ ಮ್ಯಾರಥಾನ್, ಮೇ 10 ರಂದು ಜಗಜ್ಯೋತಿ ಬಸವೇಶ್ವರ ಜಯಂತಿ ಮೆರವಣಿಗೆ



ಬೆಳಗಾವಿ : ಲಿಂಗಾಯುತ ಸಂಘಟನೆಯ ವಾರ್ಷಿಕೋತ್ಸವ ಹಾಗೂ ಬಸವೇಶ್ವರ ಜಯಂತಿ ನಿಮಿತ್ತ ಮಾ.05ರಂದು ಪ್ರಥಮ ಬಾರಿಗೆ ವಿವಿಧ ಕಾರ್ಯಕ್ರಮ ಹಾಗೂ ಮ್ಯಾರಥಾನ್ ಆಯೋಜಿಸಲಾಗುತ್ತಿದೆ ಎಂದು ಲಿಂಗಾಯುತ ಸಂಘಟನೆಯ ಮುಖಂಡರು ತಿಳಿಸಿದ್ದಾರೆ.

ಲಿಂಗಾಯುತ ಸಂಘಟನೆಯ ವಾರ್ಷಿಕೋತ್ಸವ ಹಾಗೂ ಬಸವೇಶ್ವರ ಜಯಂತಿ ನಿಮಿತ್ತ ಮಾ.05ರಂದು ಮಹಾಂತೇಶ ನಗರದ ಹಳಕಟ್ಟಿ ಭವನದಿಂದ ಮ್ಯಾರಥಾನ್ ಆಯೋಜಿಸಲಾಗಿದೆ ಎಂದು ಲಿಂಗಾಯುತ ಮುಖಂಡರು ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು.

ಮೇ 05 ರಿಂದ ಲಿಂಗಾಯತ ಸಂಘಟನೆಯ ವಾರ್ಷಿಕೋತ್ಸವ ಹಾಗೂ ಬಸವೇಶ್ವರ ಜಯಂತಿ ಕುರಿತು ಈರಣ್ಣ ದೀನನವರ್ ಮಾತನಾಡಿದರು. ಮೇ 05 ಮತ್ತು ಮೇ 07 ರಂದು ಮ್ಯಾರಥಾನ್ ನಡೆಯಲಿದ್ದು, ಹಳಕಟ್ಟಿ ಭವನದಿಂದ ಕಣಬುರ್ಗಿ ರಸ್ತೆಯಿಂದ ಮರಳಿ ಹಳಕಟ್ಟಿ ಭವನದವರೆಗೆ ಮ್ಯಾರಥಾನ್ ನಡೆಯಲಿದೆ. ಮೇ 10ರಂದು ಚೆನ್ನಮ್ಮ ವೃತ್ತದಿಂದ ಬಸವ ಜಯಂತಿ ಮೆರವಣಿಗೆ ಆರಂಭವಾಗಲಿದೆ

ಮತ್ತೋರ್ವ ಲಿಂಗಾಯತ ಮುಖಂಡರು ಮಾತನಾಡಿ, ಬೆಳಗಾವಿ 20 ವರ್ಷಗಳಿಂದ ಹಲವಾರು ಜನಪರ ಕಾರ್ಯಕ್ರಮಗಳನ್ನು ನಡೆಸಿಕೊಂಡು ಬರುತ್ತಿದೆ. ಆಧ್ಯಾತ್ಮಿಕ ಜಾಗೃತಿಯ ಜತೆಗೆ ಸಮಾಜದ ಆರ್ಥಿಕ, ಸಾಮಾಜಿಕ ಅಭಿವೃದ್ಧಿಗೆ ಯೋಜನೆಗಳನ್ನು ಸಿದ್ಧಪಡಿಸಲಾಗುತ್ತಿದೆ ಎಂದರು.

ಸಂಸ್ಥೆಯ ಸದಾಶಿವ ದೇವರಮನಿ, ಸಂಗಮೇಶ ಅರಳಿ, ರಮೇಶ ಕಳಸಣ್ಣವರ, ಎ ಶಂಕರ ಗುದಾಸ್ ಮೊದಲಾದವರು ಉಪಸ್ಥಿತರಿದ್ದರು.

## ಮೇ.4 ರಂದು ಮತದಾನ ಜಾಗೃತಿ ಬುಲೆಟ್ ರ್ಯಾಲಿ

ಬೆಳಗಾವಿ.ಮೇ.02-: ಸಾರ್ವತ್ರಿಕ ಲೋಕಸಭಾ ಚುನಾವಣೆ ಅಂಗವಾಗಿ ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ, ಜಿಲ್ಲಾ ಸ್ವೀಪ್ ಸಮಿತಿ ಇವರ ವತಿಯಿಂದ ಮೇ.4 ರಂದು ಬೆಳಗ್ಗೆ 8 ಗಂಟೆಗೆ ಮತದಾನ ಜಾಗೃತಿ ಹಮ್ಮಿಕೊಳ್ಳಲಾಗಿದೆ.

ಮತದಾನ ಜಾಗೃತಿ ಮೂಡಿಸುವ ಸಲುವಾಗಿ ಚೆನ್ನಮ್ಮ ವೃತ್ತದಿಂದ ಗೋವಾವೇಸ್, ಶಿವಾಜಿ ಗಾರ್ಡನ್, ಪಾಟೀಲ ಗಲ್ಲಿ, ಆರ್‌ಟಿಒ ಸರ್ಕಲ್‌ವರೆಗೆ ಬುಲೆಟ್ ರ್ಯಾಲಿ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಜಿಲ್ಲಾ ಸ್ವೀಪ್ ಸಮಿತಿ ಹಾಗೂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೀಟಜನ್ಯ ರೋಗಗಳ ಅರಿವು ಮೂಡಿಸಲು ಜಾಥಾ ಕಾರ್ಯಕ್ರಮ

ಗದಗ ಮೇ 2: ವಿಶ್ವ ಮಲೇರಿಯಾ ದಿನ ಪ್ರಯುಕ್ತ ಮೇ 3 ರಂದು ಬೆಳಿಗ್ಗೆ 8.00 ಘಂಟೆಗೆ ದಂಡಪ್ಪ ಮಾನ್ವ (ಎಮ್.ಸಿ.ಎಚ್ ಆಸ್ಪತ್ರೆ) ಕೆ.ಸಿ.ರಾಣಿ ರಸ್ತೆ, ಗದಗ ಕಾರ್ಯಾಲಯದಿಂದ ಸಾರ್ವಜನಕರಿಗೆ ಕೀಟಜನ್ಯ ರೋಗಗಳ ಅರಿವು ಮೂಡಿಸಲು ಜಿಲ್ಲಾ ಮಟ್ಟದ ಜಾಥಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಲೋಕಸಭಾ ಚುನಾವಣೆ: ಅಳವಂಡಿ ಗ್ರಾಮದಲ್ಲಿ ಎತ್ತಿನ ಬಂಡಿ ಜಾಥಾ ಮೂಲಕ ಜಾಗೃತಿ ಕಾರ್ಯಕ್ರಮ

## ಚುನಾವಣೆಯ ಪ್ರಜಾಪ್ರಭುತ್ವದ ಹಬ್ಬದಲ್ಲಿ ಎಲ್ಲರೂ ಭಾಗವಹಿಸಿ: ಜಿಲ್ಲಾಧಿಕಾರಿ



ಕೊಪ್ಪಳ, ಮೇ 02 : ಸಾರ್ವತ್ರಿಕ ಲೋಕಸಭಾ ಚುನಾವಣೆ-2024 ರ ಅಂಗವಾಗಿ ಕೊಪ್ಪಳ ತಾಲೂಕಿನ ಅಳವಂಡಿ ಗ್ರಾಮದ ಸರ್ಕಾರಿ ಪದವಿ ಪೂರ್ವ ಕಾಲೇಜು ಆವರಣದಲ್ಲಿ ಕೊಪ್ಪಳ ತಾಲೂಕ ಸ್ವೀಪ್ ಸಮಿತಿಯಿಂದ ಗುರುವಾರದಂದು ಎತ್ತಿನ ಬಂಡಿ ಜಾಥಾ ಕಾರ್ಯಕ್ರಮವನ್ನು ಏರ್ಪ ಡಿಸಲಾಗಿತ್ತು.

ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳಾದ ನಲಿನ್ ಅತುಲ್, ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ರಾಹುಲ್ ರತ್ನಂ ಪಾಂಡೆಯ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಯಶೋಧಾ ವಂಟಗೋಡಿ ಅವರು ತಳಿರು ತೋರಣಗಳಿಂದ ಸಿಂಗಾರಗೊಳಿಸಿದ್ದ ಗ್ರಾಮೀಣ ಬದುಕಿನ ಸೊಗಡಾದ ಎತ್ತಿನ ಬಂಡಿಯನ್ನು ಏರಿ ಗ್ರಾಮದ ಮುಖ್ಯರಸ್ತೆಯ ಮೂಲಕ ಮತದಾನ ಜಾಗೃತಿ ಮೂಡಿಸಿದ್ದು ಎಲ್ಲರ ಗಮನ ಸೆಳೆಯಿತು.

ಎತ್ತಿನ ಬಂಡಿ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಜಿಲ್ಲಾಧಿಕಾರಿಗಳಾದ ನಲಿನ್ ಅತುಲ್ ಅವರು, ಚುನಾವಣೆಯು ಪ್ರಜಾಪ್ರಭುತ್ವದ ಹಬ್ಬವಾಗಿದ್ದು, ಈ ಹಬ್ಬದಲ್ಲಿ ಎಲ್ಲರೂ ಭಾಗವಹಿಸಿ ತಪ್ಪದೇ ಮತ ಚಲಾಯಿಸಿರಿ. ಸದೃಢ ಪ್ರಜಾಪ್ರಭುತ್ವ ನಿರ್ಮಾಣವಾಗಬೇಕಾದರೆ ನಾವೆಲ್ಲರೂ ಮತದಾನದಿಂದ ಹೊರಗುಳಿಯದೇ ಮತ ಚಲಾಯಿಸಬೇಕು. ಮೇ 7 ರಂದು ನಡೆಯುವ ಲೋಕಸಭಾ ಚುನಾವಣೆ ಅಂಗವಾಗಿ ಉತ್ತಮ ಭವಿಷ್ಯಕ್ಕಾಗಿ ನಮಗಿರುವ ಅಮೂಲ್ಯವಾದ ಮತದಾನದ ಹಕ್ಕನ್ನು ಉತ್ತಮ ರೀತಿಯಲ್ಲಿ ಸದುಪಯೋಗ ಪಡಿಸಿಕೊಳ್ಳಬೇಕು. ದೇಶದ ಅಭಿವೃದ್ಧಿಯಲ್ಲಿ ಸಹಭಾಗಿತ್ವ, ಮತದಾನ ಪ್ರಜಾಪ್ರಭುತ್ವದ ಮೂಲಭೂತ ಹಕ್ಕು. ಪ್ರಜಾಪ್ರಭುತ್ವವನ್ನು ಉಳಿಸಿ ಬೆಳೆಸಿ ಗಟ್ಟಿಗೊಳಿಸಲು ಪ್ರಜೆಗಳ ಪ್ರತ್ಯಕ್ಷ ಪಾಲ್ಗೊಳ್ಳುವಿಕೆ ನಿರಂತರವಾಗಿ ಇರಬೇಕು. ಚುನಾವಣೆ ನಡೆದಾಗ ಮತಗಟ್ಟೆಗೆ ಬಂದು ಮತದಾನ ಮಾಡುವುದು, ಅದರಲ್ಲಿ ಕಣ್ಣಿಗೆ ಕಾಣುವ ಒಂದು ಸಣ್ಣ ಸಂಕೇತ. ಇದರ ಪರಿಣಾಮ ಮಾತ್ರ ಬಹಳ ದೊಡ್ಡದು ಎಂದು ಹೇಳಿದರು. ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿಗಳಾದ (2 ನೇ ಪುಟಕ್ಕೆ)

## ಇಂದು ಹುಕ್ಕೇರಿಯಲ್ಲಿ ಸಚಿವ ಅಮಿತ್ ಶಾ ಪ್ರಚಾರ ಸಭೆ: ಶಾಸಕ ನಿಖಿಲ್ ಕತ್ತಿ



ಬೆಳಗಾವಿ: ಲೋಕಸಭೆ ಚುನಾವಣಾ ಪ್ರಚಾರಾರ್ಥ ಕೇಂದ್ರ ಗೃಹ ಸಚಿವ ಅಮಿತ್ ಶಹಾ ಅವರು ಮೇ. 3 ರಂದು ಹುಕ್ಕೇರಿ ನಗರಕ್ಕೆ ಆಗಮಿಸಲಿದ್ದಾರೆ ಎಂದು ಶಾಸಕ ನಿಖಿಲ್ ಕತ್ತಿ ಹೇಳಿದರು.

ಪಟ್ಟಣದ ಪಿಎಲ್‌ಡಿ ಬ್ಯಾಂಕ್‌ನ ಆವರಣದಲ್ಲಿ ಬುಧವಾರ ಸುದ್ಧಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ನಡೆಯುವ ಚಿಕ್ಕೋಡಿ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಅಣ್ಣಾಸಾಹೇಬ ಜೊಲ್ಲೆ ಅವರ ಪರ ಏರ್ಪಡಿಸಿರುವ ಬೃಹತ್ ಪ್ರಚಾರ ಸಭೆಯಲ್ಲಿ ಅಮಿತ್ ಶಹಾ ಭಾಗವಹಿಸಲಿದ್ದಾರೆ ಎಂದರು

ಈ ಬೃಹತ್ ಪ್ರಚಾರ ಸಭೆಯಲ್ಲಿ ಲೋಕಸಭೆ ಕ್ಷೇತ್ರ ವ್ಯಾಪ್ತಿಯ ವಿಧಾನಸಭೆ ಮತಕ್ಷೇತ್ರದ ಮಾಜಿ-ಹಾಲಿ ಶಾಸಕರು, ಮುಖಂಡರು, ಕಾರ್ಯಕರ್ತರು ಭಾಗಿಯಾಗುವರು. ವಿವಿಧೆಡೆ 'ಯಿಂದ ಸಹಸ್ರಾರು ಕಾರ್ಯಕರ್ತರು ಭಾಗಿಯಾ ಗುವ ನಿರೀಕ್ಷೆಯಿದೆ. ಅಮಿತ್ ಶಹಾ ಆಗಮನದ ಹಿನ್ನಲೆ ಯಲ್ಲಿ ಪಕ್ಷದ ಚುನಾವಣಾ ಚಟುವಟಿಕೆಗಳನ್ನು ತೀವ್ರಗೊ ಳಿಸಲಾಗಿದೆ ಎಂದು ಅವರು ಹೇಳಿದರು. ಮತಪ್ರ ಚಾರ ಸಭೆಗಳಲ್ಲಿ ಟಿಕೆಟ್ ವಂಚಿತ ಮಾಜಿ ಸಂಸದ ರಮೇಶ ಕತ್ತಿ ಅವರ ಕಂಡು ಬರುವ ಅನುಪಸ್ಥಿತಿ ಕುರಿತು (2 ನೇ ಪುಟಕ್ಕೆ)

### ಲೋಕಸಭೆ ಚುನಾವಣೆ; ಎಲ್ಲಾ ಡಿಸಿ, ಎಸ್ಪಿ, ಸಿಇಒಗಳೊಂದಿಗೆ ಮುಖ್ಯ ಚುನಾವಣಾಧಿಕಾರಿ ವಿಡಿಯೋ ಸಂವಾದ

## ಯಾವುದೇ ರೀತಿಯ ತೊಂದರೆಯಾಗದಂತೆ ನಿಗಾವಹಿಸಲು ನಿರ್ದೇಶನ

ಬಳ್ಳಾರಿ,ಮೇ :ರಾಜ್ಯದ ಎರಡನೇ ಹಂತದ ಲೋಕಸಭೆ ಚುನಾವಣೆಗೆ ಮೇ 07 ರಂದು ಮತದಾನ ನಡೆಯಲಿದ್ದು, ಮತಗಟ್ಟೆಗಳಲ್ಲಿನ ಅಗತ್ಯ ಸಿದ್ಧತೆ ಖಾತ್ರಿ ಪಡಿಸಿಕೊಳ್ಳಬೇಕು. ಯಾವುದೇ ರೀತಿಯ ತೊಂದರೆಯಾಗದಂತೆ ನೋಡಿಕೊಳ್ಳಬೇಕು ಎಂದು ಮುಖ್ಯ ಚುನಾವಣಾಧಿಕಾರಿ ಮನೋಜ್ ಕುಮಾರ್ ಅವರು ಎಲ್ಲಾ ಜಿಲ್ಲಾ ಚುನಾವಣಾಧಿಕಾರಿಗಳಿಗೆ ಸೂಚಿಸಿದರು. ಅವರು, ರಾಜ್ಯದ ಎರಡನೇ ಹಂತದ ಲೋಕಸಭೆ ಚುನಾವಣೆಯ ಪೂರ್ವ ಸಿದ್ಧತೆಯ ಕುರಿತು ಬುಧವಾರದಂದು ಎಲ್ಲಾ ಜಿಲ್ಲಾ ಚುನಾವಣಾಧಿಕಾರಿ, ಜಿಲ್ಲಾ ಸ್ವೀಪ್ ನೋಡೆಲ್ ಅಧಿಕಾರಿ ಮತ್ತು ಪೊಲೀಸ್ ವರಿಷ್ಠಾಧಿಕಾರಿಗಳೊಂದಿಗೆ ವಿಡಿಯೋ ಸಂವಾದ ಸಭೆ ನಡೆಸಿ ಮಾತನಾಡಿದರು.

ಆಯಾ ಜಿಲ್ಲೆಯ ಎಲ್ಲ ಮತಗಟ್ಟೆಗಳಿಗೂ ಸ್ಥಳೀಯ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿ ಮೂಲಭೂತ ಸೌಕರ್ಯಗಳಾದ ಕುಡಿಯುವ ನೀರಿನ ವ್ಯವಸ್ಥೆ, ಶ್ಯಾಮಿಯಾನ ವ್ಯವಸ್ಥೆ, ಯರ್ಾಂಪ್, ವೀಲ್‌ಚೇರ್ ಹಾಗೂ ಇತರೆ ಅಗತ್ಯ ವ್ಯವಸ್ಥೆಗಳ ಸಿದ್ಧತೆ ಬಗ್ಗೆ ಖಾತ್ರಿಪಡಿಸಿಕೊಳ್ಳಬೇಕು. ರಾಜ್ಯದಲ್ಲಿ ಬಿಸಿಲಿನ ತಾಪಮಾನದ ಶಾಖಾಘಾತವಿದ್ದು, ಆಂಬುಲೆನ್ಸ್ ಸೇವೆ ಒದಗಿಸಬೇಕು ಎಂದು ತಿಳಿಸಿದರು.

ಮಸ್ಟರಿಂಗ್, ಡಿಮಸ್ಟರಿಂಗ್ ಮತ್ತು ಇನ್ನಿತರೆ ಚುನಾವಣೆ ಸಂಬಂಧಿತ ತರಬೇತಿ ಕಾರ್ಯಾಗಾರ ಪೂರ್ಣಗೊಳಿಸಬೇಕು. ಅಭ್ಯರ್ಥಿಗಳ ಸಮ್ಮುಖದಲ್ಲಿ ಕೊನೆಹಂತದ ಮತಯಂತ್ರಗಳ ಯಾರ್‌ಂಡಮೈಜೇಶನ್ ಕಾರ್ಯ ನಡೆಸಬೇಕು ಎಂದು ತಿಳಿಸಿದರು.

ಮೇ 07 ರಂದು ಮತದಾನ ದಿನವಾಗಿದ್ದು, ಪ್ರಜಾಪ್ರತಿನಿಧಿ ಕಾಯ್ದೆಯ ಪ್ರಕಾರ ಮತದಾನಕ್ಕೆ ನಿಗದಿಪಡಿಸಿದ ಅವಧಿ ಕೊನೆಗೊಳ್ಳುವುದಕ್ಕಿಂತ 48 ಗಂಟೆಗಳ ಮುಂಚೆ ಕೆಲವು ವಿಶೇಷ ನಿಯಮಾವಳಿಗಳು ಜಾರಿಯಲ್ಲಿರುತ್ತವೆ. ಬಹಿರಂಗ ಸಭೆಗೆ ಅನುಮತಿಯಿಲ್ಲ. ಎಲ್ಲಾ ಜಿಲ್ಲಾ ವ್ಯಾಪ್ತಿಯಲ್ಲಿ ರೆಸಾರ್ಟ್, ಹೋಟೆಲ್ ಮುಚ್ಚಲು ಕ್ರಮ ವಹಿಸಬೇಕು. ಕ್ಷೇತ್ರದ ಮತದಾರರಲ್ಲದವರನ್ನು ಕ್ಷೇತ್ರದಿಂದ ಹೊರ ನಡೆಸಬೇಕು ಎಂದು ಮುಖ್ಯ ಚುನಾವಣಾಧಿಕಾರಿ ಮನೋಜ್ ಕುಮಾರ್ ಮೀನಾ ಅವರು ಜಿಲ್ಲಾಧಿಕಾರಿಗಳಿಗೆ ನಿರ್ದೇಶನ ನೀಡಿದರು.

48 ಗಂಟೆಗಳ ಮುಂಚಿನ ಅವಧಿಯಲ್ಲಿ ಪ್ರಕಟಗೊಳ್ಳುವ ಜಾಹೀರಾತುಗಳಿಗೆ ಮಾಧ್ಯಮ ಪ್ರಮಾಣೀಕರಣ ಸಮಿತಿಯಿಂದ ಅನುಮೋದನೆಗೊಂಡಿರಬೇಕು. ಮತದಾನಕ್ಕೆ ನಿಗದಿಪಡಿಸಿದ ಅವಧಿ ಕೊನೆಗೊಳ್ಳುವುದಕ್ಕಿಂತ 48 ಗಂಟೆಗಳ ಮುಂಚೆ ಯಾವುದೇ ಮುದ್ರಣ ಮಾಧ್ಯಮದಲ್ಲಿ ಜಾಹೀರಾತು ಪ್ರಕಟಿಸಬೇಕಾದರೆ ಸಂಬಂಧಪಟ್ಟ ಅಭ್ಯರ್ಥಿ ಅಥವಾ ಪಕ್ಷವು ಮಾಧ್ಯಮ ಪ್ರಮಾಣೀಕರಣ ಸಮಿತಿಯಿಂದ ಪ್ರಮಾಣಪತ್ರ ಪಡೆದುಕೊಳ್ಳುವುದು ಕಡ್ಡಾಯವಾಗಿದ್ದು, ನಿಗಾ ವಹಿಸಲು ಎಲ್ಲಾ ಜಿಲ್ಲಾ ಚುನಾವಣಾಧಿಕಾರಿಗಳಿಗೆ ಸೂಚಿಸಿದರು.ಟಿವಿ, ರೇಡಿಯೋ, ಸ್ಥಳೀಯ ಕೇಬಲ್ ನೆಟ್‌ವರ್ಕ್ ಮತ್ತು ಎಲ್ಲ ಡಿಜಿಟಲ್ ಮಾಧ್ಯಮಗಳು ಮತದಾನ ಪೂರ್ವ 48 ಗಂಟೆಗಳ ಅವಧಿಯಲ್ಲಿ ಚುನಾವಣೆ ಸಂಬಂಧಿತ ವಿಷಯಗಳು ಪ್ರಸಾರ ಮಾಡದಂತೆ ಕ್ರಮವಹಿಸಬೇಕು ಎಂದರು.ಮತದಾನ ದಿನದಂದು, ಮತಗಟ್ಟೆಗಳಿಗೆ ಚುನಾವಣಾಧಿಕಾರಿಗಳನ್ನು ಹೊರತುಪಡಿಸಿ, ಮತ್ಯಾರು ಮೊಬೈಲ್ ಬಳಸುವಂತಿಲ್ಲ. ಮತದಾರರೂ ಕೂಡ ಮತಗಟ್ಟೆ ಕೇಂದ್ರಗಳ ಒಳಗಡೆ ತರದಂತೆ ನೋಡಿಕೊಳ್ಳಬೇಕು. ಮತಗಟ್ಟೆ ಕೇಂದ್ರಗಳ 100 ಮೀ. ವ್ಯಾಪ್ತಿಯಲ್ಲಿ ಯಾವುದೇ ಅಹಿತಕರ ಘಟನೆಗಳು ಸಂಭವಿಸದಂತೆ ಜಾಗೃತರಾಗಿರಬೇಕು ಎಂದು ತಿಳಿಸಿದರು.ಈ ವೇಳೆ ಅಪರ ಮುಖ್ಯ ಚುನಾವಣಾಧಿಕಾರಿ ಎಂ.ಕೂರ್ಮಾರಾವ್, ವೆಂಕಟೇಶ್ ಅವರು ಇದ್ದರು. ವಿಡಿಯೋ ಸಂವಾದದಲ್ಲಿ ಜಿಲ್ಲಾ ಮಟ್ಟದಿಂದ ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ, ಜಿಲ್ಲಾ ಸ್ವೀಪ್ ನೋಡೆಲ್ ಅಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಾಹುಲ್ ಶರಣಪ್ಪ ಸಂಕನೂರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು, ಅಪರ ಜಿಲ್ಲಾಧಿಕಾರಿ ಮೊಹಮ್ಮದ್ ಝುಬೇರ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.